**ಕರ್ನಾಟಕ ಸರ್ಕಾರ**
**ಪಂಚಾಯತ್ ರಾಜ್ ಆಯುಕ್ತಾಲಯ**
**ಕಾಳಿದಾಸ ಮಾರ್ಗ, ಕೆ.ಜಿ.ರಸ್ತೆ, ಬೆಂಗಳೂರು – 560 009**

ಸಂಖ್ಯೆ:ಕಪಂರಾಆ/ಅಭಿವೃದ್ಧಿ/557/2022 ದಿನಾಂಕ:14.11.2022

## ಸುತ್ತೋಲೆ

**ವಿಷಯ:** ಗ್ರಾಮ ಪಂಚಾಯಿತಿ ಗ್ರಂಥಾಲಯಗಳಲ್ಲಿ **"ಓದುವ ಬೆಳಕು"** ಕಾರ್ಯಕ್ರಮದ ಅಂಗವಾಗಿ **"ಚಿಣ್ಣರ ಚಿತ್ತಾರ ಅಭಿಯಾನ"** ಕಾರ್ಯಕ್ರಮವನ್ನು ಆಯೋಜಿಸುವ ಕುರಿತು.

***

ತಮಗೆಲ್ಲರಿಗೂ ತಿಳಿದಿರುವಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು ಮಕ್ಕಳನ್ನು ಓದುವುದು ಮತ್ತು ಕಲಿಕೆಯಲ್ಲಿ ತೊಡಗಿಸಿಕೊಳ್ಳಲು **"ಓದುವ ಬೆಳಕು"** ಕಾರ್ಯಕ್ರಮವನ್ನು ಆರಂಭಿಸಿತು. ಸದರಿ ಕಾರ್ಯಕ್ರಮದಲ್ಲಿ ಸರ್ಕಾರಿ ಶಾಲಾ ಮಕ್ಕಳನ್ನು, ವಿಶೇಷವಾಗಿ ಗ್ರಾಮೀಣ ಮಕ್ಕಳನ್ನು ವ್ಯವಸ್ಥಿತವಾಗಿ ಕಲಿಕಾ ಕ್ಷೇತ್ರಕ್ಕೆ ಮರಳಿ ತರುವ ಗುರಿಯನ್ನು ಹೊಂದಲಾಗಿತ್ತು. ಗ್ರಂಥಾಲಯಗಳನ್ನು ಗ್ರಾಮೀಣ ಜ್ಞಾನ ಕೇಂದ್ರಗಳನ್ನಾಗಿಸಲು ಗ್ರಂಥಾಲಯಗಳ ನವೀಕರಣ, ಡಿಜಿಟಲೀಕರಣ ಸೇರಿದಂತೆ ವಿವಿಧ ಕ್ರಮಗಳನ್ನು ಈಗಾಗಲೇ ಕೈಗೊಳ್ಳಲಾಗಿದೆ.

ಈ ವರ್ಷವು **"ಓದುವ ಬೆಳಕು"** ಕಾರ್ಯಕ್ರಮದ ಅಡಿಯಲ್ಲಿ ಗ್ರಾಮ ಪಂಚಾಯತಿ ಗ್ರಂಥಾಲಯಗಳಲ್ಲಿ**"ಗ್ರಾಮ ಚದುರಂಗ ಆಟ ಆಡೋಣ ಅಭಿಯಾನ", "ಗಟ್ಟಿ ಓದು ಅಭಿಯಾನ", "ಅಮ್ಮನಿಗೊಂದು ಪುಸ್ತಕ ಅಭಿಯಾನ"** ಮತ್ತು **"ಪತ್ರ ಬರೆಯುವ ಅಭಿಯಾನ"** ಚಟುವಟಿಕೆಯನ್ನು ಸಮರ್ಪಕವಾಗಿ ಆಯೋಜಿಸಲಾಗಿದ್ದು ಗ್ರಂಥಾಲಯಗಳ ಮೂಲಕ ಮಕ್ಕಳು ನಿರಂತರವಾಗಿ ಅನೇಕ ಬಗೆಯ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಲು ಅವಕಾಶ ಕಲ್ಪಿಸುವ ಅವಶ್ಯಕತೆ ಇದೆ. ಗ್ರಾಮ ಪಂಚಾಯಿತಿ ಗ್ರಂಥಾಲಯಗಳಲ್ಲಿ ಮಕ್ಕಳು ನಿಯಮಿತವಾಗಿ ಓದುವ ಮತ್ತು ಬರೆಯುವ ಅಭ್ಯಾಸದ ಜೊತೆಗೆ ಪಠ್ಯೇತರ ಚಟುವಟಿಕೆಗಳಲ್ಲಿ ಭಾಗವಹಿಸಲು ಅವಕಾಶ ಕಲ್ಪಿಸಲಾಗಿದೆ. ಇದರ ಸಲುವಾಗಿ ವಿಶೇಷವಾಗಿ, **ಡಿಸೆಂಬರ್ 1ನೇ ತಾರೀಖಿನಿಂದ 15 ದಿನಗಳ ಕಾಲ "ಚಿಣ್ಣರ ಚಿತ್ತಾರ ಅಭಿಯಾನ"** ಚಟುವಟಿಕೆಯನ್ನು ಪ್ರತೀ ಗ್ರಾಮ ಪಂಚಾಯತ್ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರಗಳಲ್ಲಿ ಆಯೋಜಿಸುವುದು.

**"ಚಿಣ್ಣರ ಚಿತ್ತಾರ ಅಭಿಯಾನ"ದ ಉದ್ದೇಶ:**

- ಮಕ್ಕಳಲ್ಲಿ ಸೃಜನಶೀಲತೆ ಹೆಚ್ಚಿಸುವುದು.
- ಮಕ್ಕಳಿಗೆ ಓದಿ ಬರೆಯುವುದರ ಜೊತೆಗೆ ಇತರೆ ಕ್ರಿಯಾತ್ಮಕ ಪಠ್ಯೇತರ ಚಟುವಟಿಕೆಗಳಲ್ಲಿ (ಸ್ಕೆಚಿಂಗ್ ಮತ್ತು ಡ್ರಾಯಿಂಗ್) ಭಾಗವಹಿಸಲು ಅವಕಾಶ ನೀಡುವುದು .
- ಮಕ್ಕಳಲ್ಲಿ ದೃಶ್ಯ ವಿಶ್ಲೇಷಣೆಯ ಕೌಶಲ್ಯಗಳನ್ನು ಉತ್ತೇಜಿಸುವುದು.
- ಮಕ್ಕಳಲ್ಲಿ ಏಕಾಗ್ರತೆಯನ್ನು ಹೆಚ್ಚಿಸುವುದು.

ಈ ಕೆಳಕಂಡ ನಿರ್ದೇಶನಗಳನ್ನು ಪಾಲಿಸಿ ಅಭಿಯಾನವನ್ನು ಯಶಸ್ವಿಗೊಳಿಸುವುದು.

- ಗ್ರಾಮ ಪಂಚಾಯತಿಯಿಂದ **"ಚಿಣ್ಣರ ಚಿತ್ತಾರ ಅಭಿಯಾನ"**ಕ್ಕೆ ಬೇಕಾಗಿರುವ ಎಲ್ಲಾ ಸಾಮಾಗ್ರಿಗಳನ್ನು ಒದಗಿಸಿ ಪೆನ್ಸಿಲ್, ಪೆನ್, ಡ್ರಾಯಿಂಗ್ ಪುಸ್ತಕ ಮತ್ತು ಕ್ರಯಾನ್ಸ್‌ಗಳು ಹಾಗೂ ಚಿತ್ರ ಬಿಡಿಸಲು ಸರಿಯಾದ ವಿಷಯವನ್ನು ಗ್ರಾಮ ಪಂಚಾಯಿತಿಯ ಗ್ರಂಥಪಾಲಕರು ನೀಡುವುದು.
- ಗ್ರಾಮ ಪಂಚಾಯಿತಿ ವ್ಯಾಪ್ತಿಯ ಶಾಲ ಶಿಕ್ಷಕರಿಂದ/ ಎನ್ ಜಿ ಓ ಸಂಸ್ಥೆಗಳಿಂದ ವಿವಿಧ ಪ್ರಕಾರಗಳ ಸೃಜನಶೀಲ ಮತ್ತು ಸುಲಭ ರೀತಿಯಾದ ಚಿತ್ರಗಳನ್ನು ಬಿಡಿಸುವ ಕುರಿತು ಗ್ರಾಮೀಣ ಮಕ್ಕಳಿಗೆ ಪರಿಚಯ ಮಾಡುವುದು.

- ಗ್ರಂಥಾಲಯದಲ್ಲಿ ಮೇಲ್ವಿಚಾರಕರು ಮಕ್ಕಳ ಸ್ಕೆಚಿಂಗ್ ಮತ್ತು ಡ್ರಾಯಿಂಗ್‌ಗಳನ್ನು ವಿಶ್ಲೇಷಿಸಿ, ಮಕ್ಕಳು ಚಿತ್ರದ ಮೂಲಕ ವ್ಯಕ್ತಪಡಿಸಿರುವ ವಿಚಾರದ ಬಗ್ಗೆ ಪ್ರತಿಕ್ರಿಯಿಸುವುದು.
- ತಿಂಗಳ ಕೊನೆಯಲ್ಲಿ ಎಲ್ಲಾ ಚಿತ್ರಕಲೆಗಳ ಪ್ರದರ್ಶನವನ್ನು ಗ್ರಾಮ ಪಂಚಾಯಿತಿ ಗ್ರಂಥಾಲಯ ಆವರಣದಲ್ಲಿ ಆಯೋಜಿಸುವುದು.
- ಗ್ರಾಮ ಪಂಚಾಯತಿಗಳಲ್ಲಿ **"ಚಿಣ್ಣರ ಚಿತ್ತಾರ ಅಭಿಯಾನ"**ದ ಮುಖಾಂತರ ಗ್ರಾಮ ಪಂಚಾಯತಿಗಳಲ್ಲಿ ಚಿತ್ರಕಲೆ ಮೇಲೆ ಉತ್ಸಾಹ ಇರುವಂತಹ ಮಕ್ಕಳಿಗೆ ಪ್ರೋತ್ಸಾಹಿಸುವುದು.
- **"ಚಿಣ್ಣರ ಚಿತ್ತಾರ ಅಭಿಯಾನ"**ದ ಚಟುವಟಿಕೆಗಳಲ್ಲಿ ಉತ್ತಮವಾಗಿ ಚಿತ್ರ ಬಿಡಿಸಿದಂತಹ ಮಕ್ಕಳಿಗೆ ಪ್ರೋತ್ಸಾಹಿಸಲು ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಅಥವಾ ತಾಲ್ಲೂಕಿನ ಕಾರ್ಯನಿರ್ವಾಹಕ ಅಧಿಕಾರಿಗಳಿಂದ ಸಹಿ ಮಾಡಿದ ಪ್ರಶಂಸನಾ ಪತ್ರವನ್ನು ನೀಡುವುದು, ಮತ್ತು ಸ್ಪರ್ಧೆಗಳನ್ನು ಏರ್ಪಡಿಸುವುದು.

ಈಗಾಗಲೇ ರಾಜ್ಯದಲ್ಲಿ 22 ಲಕ್ಷಕ್ಕಿಂತ ಹೆಚ್ಚು ಮಕ್ಕಳು ಗ್ರಾಮ ಪಂಚಾಯಿತಿ ಗ್ರಂಥಾಲಯಗಳಲ್ಲಿ ನೋಂದಾಯಿತರಾಗಿರುತ್ತಾರೆ. ಮಕ್ಕಳಿಗೆ ವಿವಿಧ ಚಟುವಟಿಕೆಗಳನ್ನು ಆಯೋಜಿಸುವುದರ ಮೂಲಕ ಇನ್ನೂ ಹೆಚ್ಚಿನದ್ದಾಗಿ ಮಕ್ಕಳನ್ನು ಎಲ್ಲಾ ಗ್ರಾಮ ಪಂಚಾಯತಿ ಗ್ರಂಥಾಲಯಗಳಿಗೆ ಉಚಿತವಾಗಿ ನೋಂದಾಯಿಸುವ ಗುರಿಯನ್ನು ಹೊಂದುವುದು.

ಆಯುಕ್ತರು
ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ
ಬೆಂಗಳೂರು.

**ಇವರಿಗೆ:**

1. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯಿತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
2. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ(ಆಯಾ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಮುಖಾಂತರ)
3. ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ (ಆಯಾ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳ ಮುಖಾಂತರ)
4. ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿ ಗ್ರಂಥಾಲಯ ಮೇಲ್ವಿಚಾರಕರುಗಳಿಗೆ (ಆಯಾ ಗ್ರಾಮ ಪಂಚಾಯಿತಿಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ಮುಖಾಂತರ)
5. ನಿರ್ದೇಶಕರು, ಸಾರ್ವಜನಿಕ ಗ್ರಂಥಾಲಯ ಇಲಾಖೆ, ವಿಶ್ವೇಶ್ವರಯ್ಯ ಗೋಪುರ, ಬೆಂಗಳೂರು (ಆಯಾಯ ಜಿಲ್ಲಾ ಕೇಂದ್ರ ಗ್ರಂಥಾಲಯಗಳಿಗೆ ಈ ಸುತ್ತೋಲೆ ಪ್ರತಿಯನ್ನು ತಲುಪಿಸುವ ವ್ಯವಸ್ಥೆಯನ್ನು ಮಾಡುವಂತೆ ಸೂಚಿಸಲಾಗಿದೆ)
6. ಮಾಹಿತಿ ಕೇಂದ್ರ/ವೆಬ್‌ಸೈಟ್, ಗ್ರಾಅಪ ಇಲಾಖೆ.

**ಪ್ರತಿಯನ್ನುಮಾಹಿತಿಗಾಗಿ:**

1) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು-560 001
2) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ(ಪಂ.ರಾಜ್) ರವರ ಆಪ್ತ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.-560 001
3) ಆಯುಕ್ತರು, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ, ಬೆಂಗಳೂರು ಇವರ ಆಪ್ತ ಸಹಾಯಕರಿಗೆ
4) ಕಛೇರಿ ಪ್ರತಿ.